## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 379 |
| 2 | ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್. ಗೋಪಿನಾಥ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 18-07-2024 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿ ಅನಧಿಕೃತ ಫ್ಲೆಕ್ಸ್, ಬ್ಯಾನರ್, ಬಂಟಿಂಗ್ ತಡೆಯುವಲ್ಲಿ ಸರ್ಕಾರ ವಿಫಲವಾಗಿರುವುದು ನಿಜವೇ; | ಅನಧಿಕೃತ ಫ್ಲೆಕ್ಸ್, ಬ್ಯಾನರ್, ಬಂಟಿಂಗ್ಸ್ ತೆರವುಗೊಳಿಸುವಿಕೆಯು ನಿರಂತರ ಪ್ರಕ್ರಿಯೆಯಾಗಿದ್ದು, ಅನಧಿಕೃತ ಜಾಹೀರಾತು ಅಳವಡಿಸಿದ ತಕ್ಷಣ ಅಳವಡಿಸುವವರ ವಿರುದ್ಧ ನಿಯಮಾನುಸಾರ ಅಗತ್ಯ ಕ್ರಮವಹಿಸಿ ತೆರವುಗೊಳಿಸಿ ಅಂತವರ ಮೇಲೆ ಕರ್ನಾಟಕ ಮುಕ್ತ ಸ್ಥಳಗಳ (ವಿರೂಪಗೊಳಿಸುವಿಕೆ ತಡೆ) ಕಾಯ್ದೆ 1981ರ ಪ್ರಕಾರ ಎಫ್.ಐ.ಆರ್ ದಾಖಲಿಸಿ ದಂಡ ವಿಧಿಸಲು ಕ್ರಮವಹಿಸಲಾಗುತ್ತಿದ್ದು, ಇದುವರೆಗೆ ಒಟ್ಟು 116 ಎಫ್.ಐ.ಆರ್ ದಾಖಲಿಸಲಾಗಿದೆ. |
| ಆ) | ಅನಧಿಕೃತ ಪ್ರಚಾರಗಳಿಂದ ಸಾರ್ವಜನಿಕರಿಗೆ ಹಾಗೂ ವ್ಯಾಪಾರಸ್ಥರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನಧಿಕೃತವಾಗಿ ಜಾಹೀರಾತು ಅಳವಡಿಸುತ್ತಿರುವುದು ಕಂಡುಬಂದ ತಕ್ಷಣವೇ ತೆರವುಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ. |
| ಇ) | ಅನಧಿಕೃತ ಫ್ಲೆಕ್ಸ್ ಬ್ಯಾನರ್‌ಗಳನ್ನು ಹಾಕುತ್ತಿರುವುದರ ಬಗ್ಗೆ ನಿರ್ಬಂಧಿಸಲು ಸರ್ಕಾರದಿಂದ ಆದೇಶ ಹೊರಡಿಸಲಾಗಿದೆಯೇ; | ಕರ್ನಾಟಕ ಮುಕ್ತ ಸ್ಥಳಗಳ (ವಿರೂಪಗೊಳುಸುವಿಕೆ ತಡೆ) ಕಾಯ್ದೆ, 1981ರ ಅನುಸಾರ ಉಪ ವಿಭಾಗದ ಸಹಾಯಕ ಕಂದಾಯ ಅಧಿಕಾರಿಗಳ ಸಹಯೋಗದೊಂದಿಗೆ ಕಾರ್ಯನಿರ್ವಾಹಕ ಅಭಿಯಂತರರು ದಂಡ ಹಾಗೂ ಎಫ್.ಐ.ಆರ್ ಅನ್ನು ದಾಖಲಿಸಿ ಅನಧಿಕೃತ ಜಾಹೀರಾತುಗಳನ್ನು ತೆರವುಗೊಳಿಸುತ್ತಿರುತ್ತಾರೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಜಾಹೀರಾತು ಉಪವಿಧಿಗಳು, 2024ಕ್ಕೆ ಸರ್ಕಾರವು ಅನುಮೋದನೆ ನೀಡಿದ್ದು, ಪ್ರಕಟಿಸಲು ಕ್ರಮವಹಿಸಲಾಗುತ್ತಿದೆ. |
| ಈ) | ನಿಯಮಬಾಹಿರವಾಗಿ ಬ್ಯಾನರ್, ಬಂಟಿಂಗ್ ಮತ್ತು ಫ್ಲೆಕ್ಸ್ ಅಳವಡಿಸಿದ್ದರೂ ಅವುಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯವಹಿಸಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; | ನಿಯಮ ಬಾಹಿರವಾಗಿ ಬ್ಯಾನರ್, ಬಂಟಿಂಗ್ಸ್ ಮತ್ತು ಫ್ಲೆಕ್ಸ್‌ಗಳನ್ನು ಪಾಲಿಕೆಯ ಸಿಬ್ಬಂದಿ ತಮ್ಮ ದೈನಂದಿನ ಕಛೇರಿ ಕೆಲಸ ಕಾರ್ಯಗಳ ಜೊತೆಗೆ ತೆರವುಗೊಳಿಸುತ್ತಿದ್ದು, ನಿರ್ಲಕ್ಷ್ಯವಹಿಸಿದ ಸಂಬಂಧಪಟ್ಟ ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ಅನ್ನು ಜಾರಿಗೊಳಿಸಿ ಕ್ರಮವಹಿಸಲಾಗುತ್ತಿದೆ. |

...2.

| | | |
|---|---|---|
| ಉ) | ದಂಡದ ರೂಪದಲ್ಲಿ ಇದುವರೆಗೂ ಸರ್ಕಾರಕ್ಕೆ ಎಷ್ಟು ಹಣ ವಸೂಲಿ ಮಾಡಲಾಗಿದೆ? (ವಿವರ ನೀಡುವುದು) | ಪಾಲಿಕೆ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ದಿನಾಂಕ: 31-05-2024ರವರೆಗೆ ಒಟ್ಟು ರೂ.5,12,500/- ಗಳನ್ನು ದಂಡ ವಸೂಲು ಮಾಡಲಾಗಿದೆ. ದಿನಾಂಕ: 01-06-2024 ರಿಂದ 09-07-2024 ರವರೆಗೆ ಒಟ್ಟು 116 ಎಫ್.ಐ.ಆರ್ ದಾಖಲಿಸಿ, ರೂ.85000/- ದಂಡ ವಸೂಲು ಮಾಡಲಾಗಿರುತ್ತದೆ. ಇಲ್ಲಿಯವರೆಗೂ ಒಟ್ಟು ರೂ.5,97,500/- ದಂಡ ವಸೂಲು ಮಾಡಲಾಗಿರುತ್ತದೆ. |

**ಸಂಖ್ಯೆ: ನಅಇ 285 ಎಂಎನ್‌ಯು 2024(ಇ)**

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ